**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ಇವರ ನಿಯಮ 72ರ ಅಡಿಯಲ್ಲಿ ಮಂಡಿಸಿರುವ ಸೂಚನೆಗೆ ಮಾನ್ಯ ಗಣಿ ಮತ್ತು ಭೂವಿಜ್ಞಾನ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರ ಹೇಳಿಕೆ:**

**ವಿಷಯ**

"ರಾಜ್ಯದಲ್ಲಿ ವಿಶೇಷ ಶಾಲೆಗಳ ನಿರ್ವಹಣೆ ತೀವ್ರ ಕಷ್ಟಕರವಾಗಿರುವುದರಿಂದ ಯಾವ ಸಂಸ್ಥೆಯವರೂ ಸಹ ವಿಶೇಷ ಶಾಲೆಗಳನ್ನು ಮುನ್ನೆಡಸಲು ಮುಂದೆ ಬರುತ್ತಿಲ್ಲ. ಇತ್ತೀಚೆಗೆ ಶಿಶುಕೇಂದ್ರಿಕೃತ ಯೋಜನೆಯಡಿ ಹೊಸದಾಗಿ ವಿಶೇಷ ಶಾಲೆಗಳನ್ನು ಅನುದಾನದ ವ್ಯಾಪ್ತಿಗೆ ತರುವ ಯಾವುದೇ ಪ್ರಯತ್ನ ಸರ್ಕಾರದಿಂದ ಆಗುತ್ತಿಲ್ಲ. ಸರ್ಕಾರದಿಂದ ಸಂಸ್ಥೆಗಳಿಗೆ ಅನುದಾನ ಸಿಗದೇ ವಿಶೇಷ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳು ಹಾಗೂ ಶಿಕ್ಷಕರ ಸ್ಥಿತಿ ಶೋಚನೀಯವಾಗಿದೆ. ಆದ್ದರಿಂದ ಸರ್ಕಾರವು ಕೂಡಲೇ ಹೊಸ ವಿಶೇಷ ಶಾಲೆಗಳನ್ನು ಶಿಶುಕೇಂದ್ರಿತ ಅನುದಾನದ ಪಟ್ಟಿಯಲ್ಲಿ ಸೇರಿಸಿ ಅನುದಾನ ಮಂಜೂರು ಮಾಡಬೇಕು ಹಾಗೂ ಅಲ್ಲಿ ಕೆಲಸ ನಿರ್ವಹಿಸುವ ಶಿಕ್ಷಕರಿಗೆ ಇತರೇ ವಿಶೇಷ ಶಾಲೆಗಳ ಶಿಕ್ಷಕರಿಗೆ ನೀಡುವ ಸರಿಸಮಾನ ವೇತನವನ್ನು ನೀಡುವ ಬಗ್ಗೆ ಸ್ಪಷ್ಟ ಮಾಹಿತಿ"

**ಉತ್ತರ**

2010ನೇ ಸಾಲಿನಲ್ಲಿ ಸಾರ್ವತ್ರಿಕ ಪ್ರಾಥಮಿಕ ಶಿಕ್ಷಣ ನೀತಿ, ರಾಷ್ಟ್ರೀಯ ಶಿಕ್ಷಣ ನೀತಿ ಹಾಗೂ ಅಂಗವಿಕಲರ ಅಧಿನಿಯಮ 1995ರನ್ವಯ 6 ರಿಂದ 18ನೇ ವಯೋಮಿತಿಯ ಎಲ್ಲಾ ಮಕ್ಕಳಿಗೂ ಉಚಿತ ಶಿಕ್ಷಣವನ್ನು ನೀಡುವುದು ಅವಶ್ಯಕವಾಗಿರುತ್ತದೆ. ಅಲ್ಲದೇ ಅಂಗವಿಕಲ ಮಕ್ಕಳಿಗೆ ವಿಶೇಷ ಶಾಲೆಗಳನ್ನು ಸರ್ಕಾರದಿಂದ / ಖಾಸಗಿ ವಲಯದಿಂದ ಕಡ್ಡಾಯವಾಗಿ ನಡೆಸುವುದು ಸಹ ಸರ್ಕಾರದ ಜವಾಬ್ದಾರಿಯಾಗಿರುತ್ತದೆ.

ಆದ್ದರಿಂದ ಸರ್ಕಾರದ ಆದೇಶ ಸಂಖ್ಯೆ:ಮಮಇ/109/ಪಿಹೆಚ್‌ಪಿ/2010, ದಿ:14-12-2010ರಂದು ಅಂಗವಿಕಲ ಮಕ್ಕಳ ಕೇಂದ್ರಿಕೃತ ವಿಶೇಷ ಶೈಕ್ಷಣಿಕ ಯೋಜನೆಯನ್ನು ರಾಜ್ಯ ಸರ್ಕಾರವು ಅನುಷ್ಠಾನಗೊಳಿಸುತ್ತಿದೆ. ಈ ಯೋಜನೆಯಡಿ ವಿಶೇಷ ಶಾಲೆಗೆ ಅನುದಾನ ಪಡೆಯುವ ಸಂಸ್ಥೆಯು ಇಲಾಖೆಯಿಂದ ಅನುಮತಿ ಪಡೆದು ಕಡ್ಡಾಯವಾಗಿ 3 ವರ್ಷಗಳ ಅವಧಿಯವರೆಗೆ ಸ್ವಯಂ ಸೇವಾ ಸಂಸ್ಥೆಯವರೇ ಶಾಲೆಗಳನ್ನು ನಿರ್ವಹಿಸಬೇಕಾಗಿರುತ್ತದೆ. ನಂತರ ರಾಜ್ಯ ಸರ್ಕಾರದ ಅನುದಾನ ಕೋರಿ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಅಧ್ಯಕ್ಷತೆಯಲ್ಲಿರುವ ಜಿಲ್ಲಾ ಮಟ್ಟದ ಸಮಿತಿ ಸಭೆಯಲ್ಲಿ ಆಯ್ಕೆಯಾದ ಪ್ರಸ್ತಾವನೆಗಳನ್ನು ನಿರ್ದೇಶಕರ ಅಧ್ಯಕ್ಷತೆಯಲ್ಲಿರುವ ರಾಜ್ಯಮಟ್ಟದ ಸಮಿತಿ ಸಭೆಯಲ್ಲಿ ಪ್ರಸ್ತಾವನೆಗಳನ್ನು ಪರಿಶೀಲಿಸಿ ಸರ್ಕಾರದ ಆಡಳಿತಾತ್ಮಕ ಮಂಜೂರಾತಿಗಾಗಿ ಸರ್ಕಾರಕ್ಕೆ ಕಳುಹಿಸಿ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಸದರಿ ಶಾಲೆಗಳಿಗೆ ಶಿಶುಕೇಂದ್ರೀಕೃತ ಯೋಜನೆಯಡಿ ಅನುದಾನಕ್ಕೆ ಒಳಪಡಿಸಿ, ಅನುದಾನವನ್ನು ಯೋಜನೆಯ ನಿಯಮಾನುಸಾರ ಬಿಡುಗಡೆ ಮಾಡಲಾಗುವುದು. ಈಗಾಗಲೇ ಮೂರು ವರ್ಷ ಪೂರೈಸಿ ಅನುದಾನ ಕೋರಿ ಸ್ವೀಕೃತವಾದ ಪ್ರಸ್ತಾವನೆಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ ಕ್ರಮವಹಿಸಲಾಗುತ್ತಿದೆ. ಶಿಶುಕೇಂದ್ರೀಕೃತ ಯೋಜನೆಯ ವಿಶೇಷ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕ/ಶಿಕ್ಷಕೇತರ ಸಿಬ್ಬಂದಿಗಳಿಗೆ ಗೌರವಧನವನ್ನು ಬಿಡುಗಡೆ ಮಾಡಲಾಗುತ್ತಿದೆ.

**ಸಂಖ್ಯೆ: ಮಮಇ 304 ಪಿಹೆಚ್‌ಪಿ 2022**

Halappa

**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ
ಇಲಾಖೆ ಸಚಿವರು.